ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : (285)315
ವಿಧಾನ ಸಭಾ ಸದಸ್ಯರ ಹೆಸರು : ಶ್ರೀ ಲಾಲಾಜಿ ಆರ್.ಮಂಡನ್ (ಕಾಪು)
ಉತ್ತರಿಸುವವರು : (ಶ್ರೀ.ಕು.ಶೋಭಾ ಕರಂದ್ಲಾಜೆ)
: ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಅ) ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ನೈರ್ಮಲ್ಯ ಸುಧಾರಣೆ, ಪರಿಸರ ಕಾಪಾಡುವ ದೃಷ್ಟಿಯಿಂದ ಸರ್ಕಾರಿ ಜಾಗದ ಕೊರತೆ ಇದ್ದು, ಒಳಚರಂಡಿ, ಶುಚಿತ್ವದ ಬಗ್ಗೆ ಸಮಸ್ಯೆಯ ಬಗ್ಗೆ ಯಾವ ಯೋಜನೆ ಕೈಗೊಳ್ಳಲಾಗಿದೆ.

ಗ್ರಾಮೀಣ ಪ್ರದೇಶಗಳ ನೈರ್ಮಲೀಕರಣಕ್ಕಾಗಿ ಹಾಗೂ ಬಯಲು ಮಲ ವಿಸರ್ಜನೆಯಂತ ಅನಿಷ್ಟ ಪದ್ಧತಿಯನ್ನು ಸಂಪೂರ್ಣವಾಗಿ ತೊಡೆದು ಹಾಕುವ ಉದ್ದೇಶದಿಂದ ಪ್ರಸ್ತುತ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಸಹಯೋಗದೊಂದಿಗೆ ಸಂಪೂರ್ಣ ಸ್ವಚ್ಚತಾ ಆಂದೋಲನ ಕಾರ್ಯಕ್ರಮವನ್ನು ಇಡೀ ರಾಜ್ಯದ್ಯಾಂತ ಅನುಷ್ಟಾನಗೊಳಿಸಲಾಗುತ್ತಿದೆ. ಗ್ರಾಮ ಮಂಚಾಯಿತಿ ವ್ಯಾಪ್ತಿಯಲ್ಲಿ ನೈರ್ಮಲ್ಯ ಸುಧಾರಣೆಗಾಗಿ ವೈಯಕ್ತಿಕ ಶೌಚಾಲಯಗಳ ನಿರ್ಮಾಣಕ್ಕಾಗಿ ಬಿ.ಪಿ.ಎಲ್ ಕುಟುಂಬಗಳಿಗೆ ಪ್ರೋತ್ಸಾಹ ಧನ ನೀಡಲಾಗುತ್ತಿದ್ದು, ಶಾಲಾ ಶೌಚಾಲಯಗಳು, ಅಂಗನವಾಡಿ ಶೌಚಾಲಯಗಳು ಹಾಗೂ ಸಮುದಾಯ ಶೌಚಾಲಯಗಳನ್ನು ಯೋಜನೆಯಡಿಯಲ್ಲಿ ನಿರ್ಮಾಣ ಮಾಡಲಾಗುತ್ತಿದೆ. ಜಾಗದ ಸಮಸ್ಯೆ ಇರುವಲ್ಲಿ ಸಮುದಾಯ ಶೌಚಾಲಯಗಳ ನಿರ್ಮಾಣ ಮಾಡಲಾಗುವುದು.

ಒಳಚರಂಡಿ ಯೋಜನೆಯ ಅನುಷ್ಠಾನವು ಸಂಪೂರ್ಣ ಸ್ವಚ್ಚತಾ ಆಂದೋಲನದಡಿಯಲ್ಲಿ ಬರುವುದಿಲ್ಲ.

ಆ) ಗ್ರಾಮ ಪಂಚಾಯತ್‌ಗಳಲ್ಲಿ ಸಂಪನ್ಮೂಲ ಕೊರತೆ ಇರುವುದರಿಂದಾಗಿ, ಈ ಯೋಜನೆಗೆ ತಾಂತ್ರಿಕ ಹಾಗೂ ಪರಿಸರದ ರಕ್ಷಣೆಯ ಪೂರಕ ವ್ಯವಸ್ಥೆಗೆ ಪ್ರತ್ಯೇಕ ಅನುದಾನ ಬಿಡುಗಡೆ ಮಾಡಲಾಗುವುದೇ?

ಸಂಪೂರ್ಣ ಸ್ವಚ್ಚತಾ ಆಂದೋಲನದಡಿಯಲ್ಲಿ ಹೆಚ್.ಆರ್.ಡಿ ಹಾಗೂ ಮಾಹಿತಿ ಶಿಕ್ಷಣ ಮತ್ತು ಸಂವಹನ ಚಟುವಟಿಕೆಯ ಅನುದಾನದಲ್ಲಿ ಗ್ರಾಮ ಪಂಚಾಯತ್ ಮಟ್ಟದಲ್ಲಿ ವಿವಿಧ ಹಂತಗಳಲ್ಲಿ ಶುಚಿತ್ವ ಶಿಕ್ಷಣ, ಶೌಚಾಲಯ ನಿರ್ಮಾಣಕ್ಕೆ ತಾಂತ್ರಿಕತೆ ಅರಿವು, ಗ್ರಾಮ ಮಟ್ಟದಲ್ಲಿ ಗೋಡೆ ಬರಹಗಳು, ಬೀದಿನಾಟಕ ಹಾಗೂ ಪರಿಸರ ರಕ್ಷಣೆ ಕುರಿತು ಘನ ಮತ್ತು ದ್ರವ ತ್ಯಾಜ್ಯ ವಸ್ತುಗಳ ನಿರ್ವಹಣೆಯ ಬಗ್ಗೆ ತರಬೇತಿ ನೀಡಲಾಗುವುದು. ಗ್ರಾಮ ಪಂಚಾಯತ್ ಮಟ್ಟದಲ್ಲಿ ಪರಿಸರ ರಕ್ಷಣೆಗೆ ಸಂಬಂಧಿಸಿದಂತೆ ತ್ಯಾಜ್ಯ ವಸ್ತುಗಳ ನಿರ್ವಹಣೆಯು ಅತ್ಯವಶ್ಯಕವಾಗಿದ್ದು ಸಂಪೂರ್ಣ ಸ್ವಚ್ಚತಾ ಆಂದೋಲನದಡಿಯಲ್ಲಿ ಒಟ್ಟು ಯೋಜನಾ ಗಾತ್ರದ ಶೇ,10 ರಷ್ಟು ಅನುದಾನವನ್ನು ಮೀಸಲಿಡಲಾಗಿದೆ.